ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಆರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 12ನೇ ಫೆಬ್ರವರಿ, 2015

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ರ ಫೆಬ್ರವರಿ 02ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 02ನೇ ಫೆಬ್ರವರಿ 2015ರಂದು ಶ್ರೀ ಬಸವರಾಜ ರಾಯರೆಡ್ಡಿಯವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

2. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಬಸವರಾಜ ರಾಯರೆಡ್ಡಿ ಅವರು "ರಾಜ್ಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಮಾಡಿಕೊಂಡಿರುವ ಒಡಂಬಡಿಕೆ" ಬಗ್ಗೆ ದಿನಾಂಕ:03.02.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 14(08)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3.ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಎಂಟನೇ ಪಟ್ಟಿ
ಆ) ದಿನಾಂಕ 09.02.2015ರ ಐದನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಅರಬೈಲ್ ಶಿವರಾಮ್ ಹೆಬ್ಬಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 68(767)	:	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಎಂಟನೇ ಪಟ್ಟಿ

ಪು.ತಿ.ನೋ.,

4 ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಗೋವಿಂದ ಎಂ.ಕಾರಜೋಳ, ಬಸವರಾಜ ಬೊಮ್ಮಾಯಿ, ಕೆ.ಜಿ.ಬೋಪಯ್ಯ, ಡಿ.ಎನ್.ಜೀವರಾಜ್ ಹಾಗೂ ಇತರರು ಪಶ್ಚಿಮ ಘಟ್ಟಗಳ ಸಂರಕ್ಷಣೆ ಕುರಿತು ಡಾ॥ ಕಸ್ತೂರಿ ರಂಗನ್ ನೀಡಿರುವ ವರದಿಯ ಅನುಷ್ಠಾನಕ್ಕೆ ವಿಳಂಬ ಮಾಡದೇ ಸರ್ಕಾರವು ತನ್ನ ಆಕ್ಷೇಪಣೆ ಸಲ್ಲಿಸಿ ಈ ವರದಿ ಅನುಷ್ಠಾನದಿಂದ ಪಶ್ಚಿಮ ಘಟ್ಟಗಳಿಗೆ ಹೊಂದಿಕೊಂಡಿರುವ ಜಿಲ್ಲೆಗಳ ಜನರಿಗೆ ಅನ್ಯಾಯವಾಗದಂತೆ ಮತ್ತು ಅವರನ್ನು ಒಕ್ಕಲೆಬ್ಬಿಸದಂತೆ ತಡೆಯುವ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಬಿ.ಎನ್.ವಿಜಯಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಅಪ್ಪಚ್ಚು ರಂಜನ್, ಯು.ಬಿ.ಬಣಕಾರ್, ಸಿ.ಟಿ. ರವಿ ಹಾಗೂ ಇತರರು ರಾಜ್ಯದಲ್ಲಿ ಅಕ್ರಮವಾಗಿ ಮರಳು ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿರುವುದರಿಂದ ರಾಜ್ಯ ಸರ್ಕಾರಕ್ಕೆ ನಷ್ಟವುಂಟಾಗುತ್ತಿದ್ದು, ಸದರಿ ಅಕ್ರಮ ಗಣಿಗಾರಿಕೆಗೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚೆ

3. ಶ್ರೀಯುತರುಗಳಾದ ಎಲ್.ಎ. ರವಿಸುಬ್ರಮಣ್ಯ, ಎಸ್. ರಘು, ಎಸ್.ಆರ್. ವಿಶ್ವನಾಥ್, ಬಿ.ಎನ್. ವಿಜಯಕುಮಾರ್, ಎಂ. ಸತೀಶ್ ರೆಡ್ಡಿ ಮತ್ತು ಎಂ. ಕೃಷ್ಣಪ್ಪ ಅವರುಗಳು ಬೆಂಗಳೂರು ಮಹಾನಗರ ಪಾಲಿಕೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಿದ ನಂತರವೂ, ಬಿ.ಬಿ.ಎಂ.ಪಿ.ಯಲ್ಲಿರುವ ಹಲವು ವಿಭಾಗಗಳಲ್ಲಿ ಒಂದಕ್ಕೊಂದು ಸಮನ್ವಯತೆ ಇಲ್ಲದಿರುವುದರಿಂದ ಬೆಂಗಳೂರು ನಗರದ ಅಭಿವೃದ್ಧಿಗೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚೆ.

4. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್.ಅಶೋಕ್.ಬಸವರಾಜ ಬೊಮ್ಮಾಯಿ, ಗೋವಿಂದ ಎಂ. ಕಾರಜೋಳ, ಕೆ.ಜಿ.ಬೋಪಯ್ಯ ಹಾಗೂ ಇತರರು ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿರುವ ಸಣ್ಣ ರೈತರುಗಳನ್ನು ತೆರವುಗೊಳಿಸುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಮಧು ಎಸ್. ಬಂಗಾರಪ್ಪ ಅವರು ಶಿವಮೊಗ್ಗ ಜಿಲ್ಲೆ ಸೊರಬ ತಾಲ್ಲೂಕಿನಲ್ಲಿ ಕಚವಿ ಏತ ನೀರಾವರಿ ಯೋಜನೆಯು ಮಂಜೂರಾಗಿದ್ದರೂ, ಕಾಮಗಾರಿ ಪ್ರಾರಂಭವಾಗದಿರುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

2.ಶ್ರೀ ಎಂ. ಕೃಷ್ಣಾರೆಡ್ಡಿ ಅವರು ಚಿಂತಾಮಣಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸುಮಾರು 400 ಹಳ್ಳಿಗಳಿದ್ದು, ಇಲ್ಲಿನ ಸಾರ್ವಜನಿಕರಿಗೆ ಕುಡಿಯುವ ನೀರಿನ ಸೌಲಭ್ಯ ಇಲ್ಲದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

3.ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ ಅವರು 2013-14ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಬಸವಕಲ್ಯಾಣ ತಾಲ್ಲೂಕಿನಾದ್ಯಂತ ಅಪಾರ ಬೆಳೆ ಹಾಗೂ ಆಸ್ತಿ ನಾಶವಾಗಿರುವುದರಿಂದ, ಸಂಕಷ್ಟದಲ್ಲಿರುವ ರೈತರಿಗೆ ಇದುವರೆಗೂ ಪರಿಹಾರ ನೀಡದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4.ಶ್ರೀ ಬಸವರಾಜ್ ಬೊಮ್ಮಾಯಿ ಅವರು ಕೇಂದ್ರ ಸರ್ಕಾರವು ತೆಲಂಗಾಣ ಮತ್ತು ಸೀಮಾಂಧ್ರ ರಾಜ್ಯಗಳ ರಚನೆಯ ಸಂದರ್ಭದಲ್ಲಿ ಹೊರಡಿಸಿರುವ ಕಾನೂನಿನಲ್ಲಿ , ಕೃಷ್ಣಾ ನದಿ ನೀರಿನ ಹಂಚಿಕೆಯಲ್ಲಿ ಕರ್ನಾಟಕದ ಮೇಲೆ ಆಗುವ ಪರಿಣಾಮ ಹಾಗೂ ಕೃಷ್ಣಾ ಟ್ರಿಬ್ಯೂನಲ್-2ರಲ್ಲಿ ಒಳಗೊಂಡಿರುವಂತಹ ಆದೇಶಗಳ ಕಾನೂನಿನ ಸ್ಥಿತಿ ಗತಿಗಳ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಸಿ.ಎನ್.ಬಾಲಕೃಷ್ಣ, ಹೆಚ್.ಡಿ. ರೇವಣ್ಣ ಮತ್ತು ಮಧು ಎಸ್. ಬಂಗಾರಪ್ಪ ಅವರುಗಳು ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಲ್ಲಿ 4702 ಲೆಕ್ಕಶೀರ್ಷಿಕೆಯಡಿಯಲ್ಲಿ ಸುಮಾರು 45.00ಕೋಟಿ ರೂಪಾಯಿಗಳ ಕಾಮಗಾರಿಗಳ ಬಿಲ್ಲು ಪಾವತಿಗೆ ಬಾಕಿಯಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

6. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಸಾ.ರಾ.ಮಹೇಶ, ಕೆ.ಎಂ.ಶಿವಲಿಂಗೇಗೌಡ, ಎನ್.ಹೆಚ್.ಕೋನರೆಡ್ಡಿ ಹಾಗೂ ಇತರರು ರಾಜ್ಯದಲ್ಲಿರುವ ಅಂಗನವಾಡಿ ಕಾರ್ಯಕರ್ತರು ತಮ್ಮ ಬೇಡಿಕೆ ಈಡೇರಿಕೆಗಾಗಿ ಜಿಲ್ಲಾಧಿಕಾರಿಗಳ ಕಛೇರಿಗಳ ಮುಂದೆ ಧರಣಿ ನಡೆಸುತ್ತಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

7. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು ರಾಜ್ಯದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಹಾಲು ಉತ್ಪಾದಕರ ಸಹಕಾರ ಸಂಘಗಳು ಹಾಗೂ ಮುಜರಾಯಿ ಇಲಾಖೆಗೆ ಸೇರಿದ ಹಣವನ್ನು ಸಹಕಾರಿ ಸಂಸ್ಥೆಗಳಲ್ಲಿ ಠೇವಣಿ ಇಡಲು ಅವಕಾಶ ಇಲ್ಲದಂತೆ ಜಾರಿಯಲ್ಲಿರುವ ಸರ್ಕಾರಿ ಸುತ್ತೋಲೆಯನ್ನು ಹಿಂತೆಗೆದುಕೊಳ್ಳುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

8. ಶ್ರೀ ಗೋವಿಂದ ಎಂ.ಕಾರಜೋಳ ಅವರು ರಾಜ್ಯದ 28 ಜಿಲ್ಲೆಗಳಲ್ಲಿ 2012-13 ಮತ್ತು 2013-14ನೇ ಸಾಲಿನಲ್ಲಿ 10649 ಜೀತದಾಳುಗಳು ತಮ್ಮ ಬಿಡುಗಡೆಗೆ ಮತ್ತು ಪುನರ್ವಸತಿಗಾಗಿ ಅರ್ಜಿ ಸಲ್ಲಿಸಿದ್ದರೂ ಇದುವರೆವಿಗೂ ಕ್ರಮಕೈಗೊಳ್ಳದಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9. ಶ್ರೀ ಎಂ.ಜೆ. ಅಪ್ಪಾಜಿ ಅವರು ಶಿವಮೊಗ್ಗ ಜಿಲ್ಲೆ ಭದ್ರಾವತಿ ನಗರಕ್ಕೆ ಹೊಂದಿಕೊಂಡಂತೆ ಇರುವ ಭದ್ರಾ ನದಿ ದಂಡೆಯ ಎರಡು ಭಾಗಗಳ ತಡೆಗೋಡೆಗಳಲ್ಲಿ ಬಿರುಕು ಮೂಡಿದ್ದು ಇದರಿಂದ ಅಪಾಯ ಸಂಭವಿಸುವ ಮೊದಲೇ ತಡೆಗೋಡೆಯನ್ನು ದುರಸ್ತಿಗೊಳಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ಮಾಗಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ರಾಮನಗರ ತಾಲ್ಲೂಕು ಬಿಡದಿ ಹೋಬಳಿ, ಭೈರಮಂಗಳ ಕೆರೆಗೆ ಬೆಂಗಳೂರಿನಿಂದ ಹರಿದು ಬರುವ ವೃಷಭಾವತಿ ನದಿಯ ಕಲುಷಿತ ನೀರನ್ನು ಶುದ್ಧೀಕರಣ ಮಾಡಿ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

11. ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ.ರೇವಣ್ಣ ಮತ್ತು ಸಿ.ಎನ್. ಬಾಲಕೃಷ್ಣ ಅವರುಗಳು ಸಮಾಜ ಕಲ್ಯಾಣ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ಈ ಹಿಂದೆ ಜಿಲ್ಲಾ ಪಂಚಾಯತ್ ವ್ಯಾಪ್ತಿಗಿದ್ದ ಟೆಂಡರ್ ಕರೆಯುವ ಅಧಿಕಾರವನ್ನು ಆಯುಕ್ತರ ಕಛೇರಿಯ ವ್ಯಾಪ್ತಿಗೆ ತಗೆದುಕೊಂಡಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

12. ಶ್ರೀ ಹೆಚ್.ಪಿ. ಮಂಜುನಾಥ ಅವರು ಕರ್ನಾಟಕ ಗೃಹ ಮಂಡಳಿಯಿಂದ 2008ರಿಂದ 2013ನೇ ಆರ್ಥಿಕ ಸಾಲಿನವರೆಗಿನ ಅವಧಿಯ ಭೂ ಖರೀದಿ, ಭೂ ಸ್ವಾಧೀನ ಮತ್ತು ಅಭಿವೃದ್ಧಿ ಹಾಗೂ ನಿವೇಶನಗಳ/ಮನೆಗಳ/ಫ್ಲಾಟ್‌ಗಳ ಹಂಚಿಕೆ ವಿಚಾರವಾಗಿ ಭಾರತ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರು ಸಲ್ಲಿಸಿರುವ ವರದಿಯನ್ವಯ ಮಂಡಳಿಯ ಅಸಮರ್ಪಕ ಕಾರ್ಯ ನಿರ್ವಹಣೆಯಿಂದ ಕರ್ನಾಟಕ ಗೃಹ ಮಂಡಳಿ ಹಾಗೂ ಸರ್ಕಾರಕ್ಕೆ ಆಗಿರುವ ನಷ್ಟ ಮತ್ತು ರೈತರಿಗೆ ಆಗಿರುವ ವಂಚನೆಯ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಎಸ್. ಭೀಮಾ ನಾಯಕ್ ಅವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲ್ಲೂಕಿನಲ್ಲಿ ಕಳೆದ ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿಯಿಂದ ಈರುಳ್ಳಿ ಬೆಳೆದ ರೈತರು ನಷ್ಟ ಅನುಭವಿಸುತ್ತಿರುವುದರಿಂದ ಈ ರೈತರಿಗೆ ಪರಿಹಾರ ಮತ್ತು ಬೆಳೆಗೆ ಬೆಂಬಲ ಬೆಲೆ ಘೋಷಿಸುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

14. ಶ್ರೀಯುತರುಗಳಾದ ಎನ್.ಹೆಚ್. ಕೋನರಡ್ಡಿ ಮತ್ತು ಬಿ.ಬಿ.ನಿಂಗಯ್ಯ ಅವರುಗಳು ಕೃಷ್ಣ ಭಾಗ್ಯ ಜಲ ನಿಗಮದ ಮುಳುವಾಡ ಹಾಗೂ ನಂದವಾಡ ಏತ ನೀರಾವರಿ ಯೋಜನೆಗಳಿಗೆ ಕರ್ನಾಟಕ ಪಾರದರ್ಶಕ ಕಾಯ್ದೆಯನ್ನು ಉಲ್ಲಂಘಿಸಿ ಅಸಮರ್ಥ ಹಾಗೂ ತಾಂತ್ರಿಕ ಪರಿಣಿತರಲ್ಲದ ಗುತ್ತಿಗೆದಾರರಿಗೆ ಕಾಮಗಾರಿಯನ್ನು ನೀಡಿರುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

15. ಡಾ|| ಸಿ.ಎನ್. ಅಶ್ವತ್ಥನಾರಾಯಣ ಮತ್ತು ಶ್ರೀ ಎಂ. ಸತೀಶ್ ರೆಡ್ಡಿ ಅವರುಗಳು ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಬೆಂಗಳೂರು ಮಹಾನಗರ ಪಾಲಿಕೆಯ ದಾಖಲೆ-ಕಡತ ಹಾಗೂ ಇನ್ನಿತರ ಕಾಗದ ಪತ್ರಗಳು ದಿನಾಂಕ: 27.12.2014ರಂದು ಖಾಸಗಿ ಕಟ್ಟಡದಲ್ಲಿ ಲೋಕಾಯುಕ್ತ ದಾಳಿಯಿಂದ ಪತ್ತೆಯಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm